## ಕರ್ನಾಟಕ ಸರ್ಕಾರದ ನಡವಳಿಗಳು

ಕೈಗಾರಿಕಾ ವಿಕಾಸ ಯೋಜನಾ.

**ವಿಷಯ:** [redacted] ಕಾರ್ಯಕ್ರಮಗಳಿಗೆ ಮಾರ್ಗಸೂಚಿಗಳನ್ನು ಅನುಮೋದಿಸುವ ಬಗ್ಗೆ.

**ಓದಲಾಗಿದೆ:** ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈವಾಇ/ಎಂಎಸ್ಎಂಇ/ಕೈವಿಅ2/ಕೈವಿಯೋ/ಮಾಸೂ16/2016-17, ದಿನಾಂಕ: 10.06.2016.

* * * * *

**ಪ್ರಸ್ತಾವನೆ:**

ಪ್ರಾದೇಶಿಕ ಅಸಮತೋಲನ ನಿವಾರಣೆಗೆ ರಚಿಸಿರುವ ಡಾ|| ಡಿ.ಎಂ. ನಂಜುಂಡಪ್ಪ ಉನ್ನತ ಮಟ್ಟದ ಸಮಿತಿಯು ನೀಡಿರುವ ವರದಿ ಪ್ರಕಾರ ಸರ್ಕಾರವು ರಾಜ್ಯದ 14 ಜಿಲ್ಲೆಗಳಲ್ಲಿ 39 ತಾಲ್ಲೂಕುಗಳನ್ನು ಅತ್ಯಂತ ಹಿಂದುಳಿದ ತಾಲ್ಲೂಕುಗಳೆಂದು ಘೋಷಿಸಿದೆ. ಈ 39 ತಾಲ್ಲೂಕುಗಳಲ್ಲಿನ ಕೈಗಾರಿಕಾಕರಣಕ್ಕಾಗಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯು "ಕೈಗಾರಿಕಾ ವಿಕಾಸ" ಎಂಬ ಹೊಸ ಯೋಜನೆಯನ್ನು 2005-06ನೇ ಸಾಲಿನಲ್ಲಿ ರೂಪಿಸಿದೆ.

ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿ ಗ್ರಾಮೀಣ ಕೈಗಾರಿಕೆಗಳನ್ನು ಹಾಗೂ ಕುಶಲಕರ್ಮಿಗಳ ಆಧಾರಿತ ಘಟಕಗಳನ್ನು ಪ್ರಾರಂಭಿಸಲು ಪ್ರೋತ್ಸಾಹ ನೀಡಿ, ಕೈಗಾರಿಕೆಗಳ ಬೆಳವಣಿಗೆಗೆ ಅನುಕೂಲಕರ ವಾತಾವರಣ ಕಲ್ಪಿಸಿ, ತಾಲ್ಲೂಕಿನ ಸಾಮಾಜಿಕ ಹಾಗೂ ಆರ್ಥಿಕ ಮಟ್ಟವನ್ನು ಹೆಚ್ಚಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಈ ಯೋಜನೆಯಡಿಯಲ್ಲಿ ಸ್ಥಳೀಯ ಸಂಪನ್ಮೂಲ ಆಧಾರಿತ, ಸ್ಥಳೀಯ ಕುಶಲತೆ ಹಾಗೂ ಅವಶ್ಯಕತೆಗೆ ಅನುಗುಣವಾಗಿ ಕೈಗಾರಿಕಾ ಪ್ರದೇಶ, ಮಳಿಗೆ, ಅಡಚಣೆ ಇಲ್ಲದೆ ವಿದ್ಯುಚ್ಛಕ್ತಿ, ತರಬೇತಿ ಸೌಲಭ್ಯಗಳು, ಗುಂಪು ಕೈಗಾರಿಕಾ ಅಭಿವೃದ್ಧಿಗಳಿಗೆ ಪ್ರೋತ್ಸಾಹ ಹಾಗೂ ಮಾರುಕಟ್ಟೆ ಸೌಲಭ್ಯಗಳನ್ನು ಒದಗಿಸಲಾಗುತ್ತದೆ.

ಮೇಲೆ ಓದಲಾದ ಪತ್ರದಲ್ಲಿ ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರು ಅನುಮೋದನೆಗಾಗಿ ಸಲ್ಲಿಸಿರುವ ಮಾರ್ಗಸೂಚಿಗಳನ್ನು ಪರಿಶೀಲಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿರುತ್ತದೆ.

**ಸರ್ಕಾರದ ಆದೇಶ ಸಂಖ್ಯೆ: ವಾಕೈ 112 ಸಿಎಸ್‌ಸಿ 2016, ಬೆಂಗಳೂರು, ದಿನಾಂಕ: 29.08.2016**

ಡಾ॥ ಡಿ.ಎಂ. ನಂಜುಂಡಪ್ಪ ಉನ್ನತ ಮಟ್ಟದ ಸಮಿತಿಯು ನೀಡಿರುವ ವರದಿಯಲ್ಲಿ ಘೋಷಿಸಲಾಗಿರುವ ರಾಜ್ಯದ 14 ಜಿಲ್ಲೆಗಳಲ್ಲಿನ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿನ ಕೈಗಾರಿಕಾಕರಣಕ್ಕಾಗಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ "ಕೈಗಾರಿಕಾ ವಿಕಾಸ" ಯೋಜನೆಯ ಮರು ರೂಪಿಸಿದ ಈ ಕೆಳಕಂಡ ಮಾರ್ಗಸೂಚಿಗಳಿಗೆ ಅನುಮೋದನೆ ನೀಡಲಾಗಿದೆ. ಈ ಯೋಜನೆಯ ಅನುಷ್ಠಾನವನ್ನು ಈ ಆದೇಶದಲ್ಲಿ ಅನುಮೋದಿಸಲಾಗಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

ಈ ಯೋಜನೆಯ ಮಾರ್ಗಸೂಚಿ ಕುರಿತಂತೆ ಹಿಂದೆ ಸರ್ಕಾರದಿಂದ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ರದ್ದುಪಡಿಸಲಾಗಿದೆ.

**ಯೋಜನೆಯ ಹೆಸರು** : ಕೈಗಾರಿಕಾ ವಿಕಾಸ ಯೋಜನೆ
**ಲೆಕ್ಕಶೀರ್ಷಿಕೆ** : 2851-00-102-0-70-059 (ಯೋಜನೆ)

**ಹಿನ್ನೆಲೆ:**

ಡಾ॥ ಡಿ. ಎಂ. ನಂಜುಂಡಪ್ಪನವರ ಸಮಿತಿಯ ವರದಿಯನ್ವಯ ರಾಜ್ಯದಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಿಸಲು ರಚಿಸಲಾಗಿರುವ ಉನ್ನತ ಮಟ್ಟದ ಸಮಿತಿಯ ಶಿಫಾರಸ್ಸಿನಂತೆ ಸರ್ಕಾರವು ರಾಜ್ಯದ 39 ಅತ್ಯಂತ ಹಿಂದುಳಿದ ತಾಲ್ಲೂಕುಗಳಲ್ಲಿ ಕೈಗಾರಿಕೀಕರಣ, ಆರ್ಥಿಕ ಮತ್ತು ಸಾಮಾಜಿಕ ಅಸಮತೋಲನ ನಿವಾರಣೆಗಾಗಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ವತಿಯಿಂದ ಕೈಗಾರಿಕಾ ವಿಕಾಸ ಯೋಜನೆಯನ್ನು 2005-06ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ.

**ಯೋಜನೆಯ ಚೌಕಟ್ಟಿನ ಅಂಶಗಳು:**

1) ಡಾ॥ ಡಿ.ಎಂ. ನಂಜುಂಡಪ್ಪ ಉನ್ನತ ಮಟ್ಟದ ಸಮಿತಿಯು ನೀಡಿರುವ ವರದಿ ಪ್ರಕಾರ ಸರ್ಕಾರವು ರಾಜ್ಯದ 14 ಜಿಲ್ಲೆಗಳಲ್ಲಿ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿ ಹೊಸ ಕೈಗಾರಿಕಾ ವಸಾಹತು/ಪ್ರದೇಶ ಸ್ಥಾಪನೆಗೆ ಹಾಗೂ ಅಸ್ತಿತ್ವದಲ್ಲಿರುವ ಕೈಗಾರಿಕಾ ವಸಾಹತು/ಪ್ರದೇಶಗಳ ಉನ್ನತೀಕರಣಗೊಳಿಸುವುದು, ಉದ್ಯಮಶೀಲತ ಅರಿವು, ಉದ್ಯಮಶೀಲತಾ ಪ್ರೇರಣಾ ಕಾರ್ಯಕ್ರಮ ಹಾಗೂ ಕೌಶಲ್ಯಾಭಿವೃದ್ಧಿ ತರಬೇತಿ ಏರ್ಪಡಿಸುವುದು.

2) ಈ ಕಾರ್ಯಕ್ರಮಗಳನ್ನು ಈ ಕೆಳಕಂಡ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲಾಗುವುದು.

- ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭಿವೃದ್ಧಿ ನಿಗಮ
- ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ
- ಜಿಲ್ಲಾ ಕೈಗಾರಿಕಾ ಕೇಂದ್ರಗಳು
- ಸರ್ಕಾರದ / ಸರ್ಕಾರದಿಂದ ಅಂಗೀಕೃತಗೊಂಡ ಸಂಸ್ಥೆಗಳು

<u>ಯೋಜನೆಯ ಮಾರ್ಗಸೂಚಿಗಳು:</u>

1) ಈ ಯೋಜನೆಯಡಿ ಅನುಷ್ಠಾನಗೊಳಿಸುವ ಎಲ್ಲಾ ಕಾರ್ಯಕ್ರಮಗಳನ್ನು ಸರ್ಕಾರದ ಆದೇಶ ಸಂಖ್ಯೆ: ಸಿಐ 154 ಸಿಎಸ್‌ಸಿ 2005, ದಿನಾಂಕ: 08.12.2005 ರಲ್ಲಿ ರಚಿಸಿರುವ ಸಮಿತಿಯಲ್ಲಿ (Empowered Committee) ಮಂಡಿಸಿ ಅನುಮೋದನೆ ಪಡೆದ ನಂತರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸತಕ್ಕದ್ದು.

2) ಹೊಸ ಕೈಗಾರಿಕಾ ಪ್ರದೇಶ ಹಾಗೂ ವಸಾಹತುಗಳ ಅಭಿವೃದ್ಧಿ:

- ರಾಜ್ಯದ ಅತ್ಯಂತ ಹಿಂದುಳಿದ 39 ತಾಲ್ಲೂಕುಗಳಲ್ಲಿ ಹೊಸದಾಗಿ ಸ್ಥಾಪಿಸುವ ಕೈಗಾರಿಕಾ ಪ್ರದೇಶ ಹಾಗೂ ಕೈಗಾರಿಕಾ ವಸಾಹತುಗಳಲ್ಲಿ ಎಂ.ಎಸ್.ಎಂ.ಇ. ಕೈಗಾರಿಕೆಗಳಿಗೆ ಪೂರಕವಾಗಿ ಬೇಕಾಗಿರುವ ರಸ್ತೆ, ನೀರು, ಒಳಚರಂಡಿ, ವಿದ್ಯುತ್ ಇತ್ಯಾದಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಿ ಅನುದಾನವನ್ನು ಒದಗಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.

- ಒಟ್ಟು ಯೋಜನಾ ವೆಚ್ಚದಲ್ಲಿ ಕನಿಷ್ಠ ಶೇ.25 ರಷ್ಟು ಹಣವನ್ನು ಅನುಷ್ಠಾನ ಸಂಸ್ಥೆಗಳು (ಕೆ.ಎಸ್.ಎಸ್.ಐ.ಡಿ.ಸಿ. / ಕೆ.ಐ.ಎ.ಡಿ.ಬಿ.) ವಿನಿಯೋಗಿಸಬೇಕಾಗಿದ್ದು, ರಾಜ್ಯದ ಪಾಲಿನ ಅನುದಾನವನ್ನು ಆಯಾ ಸಾಲಿನ ಅನುದಾನ ಹಂಚಿಕೆಯ ಲಭ್ಯತೆಯ ಆಧಾರದ ಮೇಲೆ ಬಿಡುಗಡೆ ಮಾಡಬಹುದಾಗಿರುತ್ತದೆ. ಕೈಗಾರಿಕಾ ಪ್ರದೇಶ ಹಾಗೂ ಕೈಗಾರಿಕಾ ವಸಾಹತುಗಳಲ್ಲಿ ಉನ್ನತೀಕರಣ ಯೋಜನೆಗಳಿಗೆ ಅನುದಾನವು ಲಭ್ಯವಿದ್ದಲ್ಲಿ ಮಾತ್ರ ಪರಿಗಣಿಸಬಹುದಾಗಿರುತ್ತದೆ.

- ಕರ್ನಾಟಕ ಕೈಗಾರಿಕಾ ಅಭಿವೃದ್ಧಿ ಮಂಡಳಿ (ಕೆ.ಐ.ಎ.ಡಿ.ಬಿ.) ಮತ್ತು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ (ಕೆ.ಎಸ್.ಎಸ್.ಐ.ಡಿ.ಸಿ.)ಗಳು ಸಲ್ಲಿಸಬೇಕಾದ ದಾಖಲಾತಿಗಳು:-

  - ಅಭಿವೃದ್ಧಿ ಪಡಿಸಲಿರುವ ಕೈಗಾರಿಕಾ ಕ್ಷೇತ್ರವು ಹೊಸದಾಗಿರುವ ಬಗ್ಗೆ ಸ್ಪಷ್ಟವಾದ ವಿವರಣೆ.
  - ಕೈಗಾರಿಕಾ ಭೂಮಿಯು ಸಂಸ್ಥೆಯ ಹೆಸರಿನಲ್ಲಿ ವರ್ಗಾವಣೆ ಆಗಿರುವ ಬಗ್ಗೆ ಎಲ್ಲಾ ಸರ್ವೆ ನಂಬರ್‌ಗಳನ್ನು ಹೊಂದಿರುವ ದಾಖಲಾತಿ ಪತ್ರ, ಈ ಸಂದರ್ಭದಲ್ಲಿ ಸಂಪೂರ್ಣ ಜಮೀನು ಕೈಗಾರಿಕಾ ಉದ್ದೇಶಕ್ಕಾಗಿ ಮೀಸಲಿರಿಸಿದ ಬಗ್ಗೆ ಕೂಡ ದೃಢೀಕರಿಸುವುದು.

- ಸದರಿ ಉದ್ದೇಶಿತ ಕೈಗಾರಿಕಾ ಪ್ರದೇಶ/ವಸಾಹತುವಿನ ಅಭಿವೃದ್ಧಿ ಕಾಮಗಾರಿಗಳಿಗೆ ಈಗಾಗಲೇ ಸರ್ಕಾರದ ವಿವಿಧ ಯೋಜನೆಗಳಡಿಯಲ್ಲಿ ಅನುದಾನ ಪಡೆಯಲಾಗಿದೆಯೇ ಎಂಬ ಬಗ್ಗೆ ವಿವರಗಳು.
- ಉದ್ದೇಶಿತ ಕೈಗಾರಿಕಾ ಪ್ರದೇಶ/ವಸಾಹತುವಿನಲ್ಲಿ ಅಭಿವೃದ್ಧಿ ಪಡಿಸುವ ಒಟ್ಟು ನಿವೇಶನ ಹಾಗೂ ಮಳಿಗೆಗಳ ನಿರ್ಮಾಣ.
- ಸಕ್ಷಮ ಪ್ರಾಧಿಕಾರದಿಂದ ನಿಗಧಿತ ಅವಧಿಯಲ್ಲಿ ಪೂರೈಸಲು ತಯಾರಿಸಿದ ಪರ್ಟ್ ಚಾರ್ಟ್ (PERT CHART).
- ಸರ್ಕಾರದ ಅನುದಾನವನ್ನು ಹೊರತುಪಡಿಸಿ ಉಳಿದ ವೆಚ್ಚವನ್ನು ಸಂಸ್ಥೆಯಿಂದ ಭರಿಸುವ ಬಗ್ಗೆ ಒಪ್ಪಿಗೆ ಪತ್ರ.
- ಒಟ್ಟು ವೆಚ್ಚದಲ್ಲಿ ಸರ್ಕಾರದ ಅನುದಾನವನ್ನು ಕಡಿತಗೊಳಿಸಿ ಉಳಿದ ವೆಚ್ಚವನ್ನು ಆಧರಿಸಿ ನಿವೇಶನದ ಬೆಲೆಯನ್ನು ನಿರ್ಣಯಿಸಿ ಹಂಚುವುದಾಗಿ ಒಪ್ಪಿಗೆ ಪತ್ರ.
- ಕೈಗಾರಿಕಾ ನಿವೇಶನ ಹಾಗೂ ಮಳಿಗೆಗಳ ಬೇಡಿಕೆಯ ಬಗ್ಗೆ ಸಂಸ್ಥೆಯಿಂದ ಅಥವಾ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ ಅವರಿಂದ ತಯಾರಿಸಲಾದ ಸಾಧ್ಯತಾ ಸಮೀಕ್ಷೆ ವರದಿ.
- ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಂಡಿದ್ದರೆ ಟೆಂಡರ್ ಅಧಿಸೂಚನೆ, ಕಾಮಗಾರಿ ಆದೇಶ ಹಾಗೂ ಇತರೆ ದಾಖಲಾತಿಗಳು.

**3) ಉದ್ಯಮಶೀಲತಾ ಪ್ರೇರಣಾ ಶಿಬಿರ, ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ ಹಾಗೂ ಕೌಶಲ್ಯಾಭಿವೃದ್ಧಿ ತರಬೇತಿ:**

- **ಉದ್ಯಮಶೀಲತಾ ಪ್ರೇರಣಾ ಶಿಬಿರ:** ಒಂದು ದಿನದ ತಾಲ್ಲೂಕು ಹಾಗೂ ಹೋಬಳಿ ಕೇಂದ್ರಗಳಲ್ಲಿ ಏರ್ಪಡಿಸುವ ಕಾರ್ಯಕ್ರಮಗಳಿಗೆ ರೂ. 20,000/- ಹಾಗೂ ಜಿಲ್ಲಾ ಮಟ್ಟದ ಕಾರ್ಯಕ್ರಮಕ್ಕೆ ರೂ. 25,000/- ಗಳನ್ನು ಬಳಸಿಕೊಂಡು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಚಟುವಟಿಕೆಗಳು/ಕಾರ್ಯಕ್ರಮಗಳು, ಕೇಂದ್ರ / ರಾಜ್ಯ ಸರ್ಕಾರದ ಯೋಜನೆಗಳ ಅನುಷ್ಠಾನದ ಬಗ್ಗೆ ಅರಿವು ಮೂಡಿಸುವುದು. ಪ್ರತಿ ಶಿಬಿರದಲ್ಲಿ ಕನಿಷ್ಠ 30 ಅಭ್ಯರ್ಥಿಗಳಿರತಕ್ಕದ್ದು.

- **ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ:** ಒಂದು ವಾರದ ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮದಲ್ಲಿ ಕೈಗಾರಿಕಾ ನಿವೇಶನ, ಮಳಿಗೆ, ಬ್ಯಾಂಕುಗಳಿಂದ ಸಾಲ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಿರುವ ಉದ್ಯಮಶೀಲರು, ಸ್ವಂತ ಬಂಡವಾಳವನ್ನು ತೊಡಗಿಸಿ ಆಸಕ್ತಿಯುಳ್ಳ ಯುವಕ/ಯುವತಿಯರಿಗೆ ಕೈಗಾರಿಕೆ ಹಾಗೂ ಸೇವಾ ಚಟುವಟಿಕೆಗಳನ್ನು ಪ್ರಾರಂಭಿಸಲು ಪೂರಕವಾದ ಮಾರ್ಗದರ್ಶನವನ್ನು ನೀಡುವುದು. ಈ ಕಾರ್ಯಕ್ರಮಗಳನ್ನು ಜಿಲ್ಲಾ ಕೈಗಾರಿಕಾ ಕೇಂದ್ರಗಳು, ಸಿಡಾಕ್, ಟೆಕ್ಸಾಕ್, ರೂಡ್ ಸೆಟಿ ಹಾಗೂ ಸರ್ಕಾರದ ಸಂಸ್ಥೆಗಳಿಂದ ಅನುಷ್ಠಾನಗೊಳಿಸಬಹುದಾಗಿದೆ. ಪ್ರತಿ ಕಾರ್ಯಕ್ರಮಕ್ಕೆ ಕನಿಷ್ಠ 30 ಅಭ್ಯರ್ಥಿಗಳಿಗೆ ತರಬೇತಿಯನ್ನು ನೀಡಲು ರೂ. 1,00,000/- ಗಳವರೆಗೆ ಮಂಜೂರು ಮಾಡಬಹುದು.

- **ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ:** ಆಧುನಿಕ ಮತ್ತು ತಾಂತ್ರಿಕ ಯುಗದಲ್ಲಿ ಸ್ಥಾಪನೆ ಆಗುತ್ತಿರುವ ಕೈಗಾರಿಕೆಗಳಿಗೆ ಮಾನವ ಸಂಪನ್ಮೂಲಗಳನ್ನು ಒದಗಿಸುವ ಮತ್ತು ನಿರುದ್ಯೋಗಿ ಯುವಕ/ಯುವತಿಯರಿಗೆ ಕೈಗಾರಿಕೆಗಳಲ್ಲಿ ಉದ್ಯೋಗಾವಕಾಶ ಮತ್ತು ಸ್ವಂತ ಉದ್ದಿಮೆಗಳ ಸ್ಥಾಪನೆಗೆ ನೆರವಾಗುವಂತೆ ಸೂಕ್ತ ಪಠ್ಯಕ್ರಮದೊಂದಿಗೆ ಈ ಕಾರ್ಯಕ್ರಮವನ್ನು ಸರ್ಕಾರದ ಅನುಮತಿ ಪತ್ರ ಸಿಐ 81 ಸಪ್ರಕೈ 2014 ದಿನಾಂಕ 14.10.2014ರಲ್ಲಿ ಅನುಮೋದಿಸಿರುವ ಮಾರ್ಗಸೂಚಿಯನ್ವಯ ಅನುಷ್ಠಾನಗೊಳಿಸತಕ್ಕದ್ದು.

**4) ಯೋಜನೆಯ ಅನುಷ್ಠಾನ:**

- ಆಯಾ ವರ್ಷದ ಆಯವ್ಯಯದಲ್ಲಿ ಇಲಾಖೆಗೆ ನಿಗಧಿಪಡಿಸಿರುವ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳಿಂದ ಆಯುಕ್ತರು, ಕೈಗಾರಿಕಾಭಿವೃದ್ಧಿ ಇವರು ಪಡೆದು ಸರ್ಕಾರದ ಅನುಮೋದನೆಗೆ ಸಲ್ಲಿಸತಕ್ಕದ್ದು.

- ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ ಅಗತ್ಯ ದಾಖಲೆಗಳೊಂದಿಗೆ ಅನುಷ್ಠಾನ ಸಂಸ್ಥೆಗಳು ಪ್ರಸ್ತಾವನೆಯನ್ನು ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

- ನಿರ್ದೇಶನಾಲಯವು ಪ್ರಸ್ತಾವನೆಯನ್ನು ಮಾರ್ಗಸೂಚಿಯನ್ವಯ ಪರಿಶೀಲಿಸಿದ ನಂತರ ಅನುದಾನ ಬಿಡುಗಡೆಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು.

- ಅನುಷ್ಠಾನ ಸಂಸ್ಥೆಗೆ ಬಿಡುಗಡೆಯಾಗಿರುವ ಅನುದಾನವನ್ನು ಸದ್ಬಳಕೆ ಮಾಡಲು ಕೈಗೊಂಡಿರುವ ಕ್ರಮವನ್ನು ಪರಿಶೀಲಿಸಿ ತದನಂತರ ನಿರ್ದೇಶನಾಲಯವು ಬಾಕಿ ಅನುದಾನ ಬಿಡುಗಡೆಗೆ ಕ್ರಮ ಜರುಗಿಸತಕ್ಕದ್ದು.

**5) ಷರತ್ತುಗಳು ಮತ್ತು ನಿಬಂದನೆಗಳು:**

- ಬಿಡುಗಡೆಯಾದ ಅನುದಾನವನ್ನು ಅನುಮೋದಿತ ಕಾರ್ಯಕ್ರಮಗಳಿಗೆ ಮಾತ್ರ ಬಳಸತಕ್ಕದ್ದು.

- ಯೋಜನೆ ಅನುಷ್ಠಾನವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ಅದರಡಿಯಲ್ಲಿ ರೂಪಿಸಿರುವ ನಿಯಮಗಳು ಅನ್ವಯಿಸಿದ್ದಲ್ಲಿ, ಕಡ್ಡಾಯವಾಗಿ ಅನುಸರಿಸತಕ್ಕದ್ದು.

- ಯೋಜನೆ ಅನುಷ್ಠಾನವನ್ನು ಪರ್ಟ್ ಚಾರ್ಟ್ (PERT CHART) ಪ್ರಕಾರ ಪೂರ್ಣಗೊಳಿಸಿ ಉಪಯುಕ್ತತಾ ಪ್ರಮಾಣ ಪತ್ರ ಮತ್ತು ಖರ್ಚಿನ ವಿವರ ಸಲ್ಲಿಸತಕ್ಕದ್ದು. ಯೋಜನಾ ವೆಚ್ಚಕ್ಕಿಂತ ಹೆಚ್ಚುವರಿಯಾದಲ್ಲಿ ಅದನ್ನು ಸಂಸ್ಥೆಯೇ ಭರಿಸತಕ್ಕದ್ದು.

- ಸರ್ಕಾರವು ಆಗಿಂದಾಗ್ಗೆ ಸೂಚಿಸುವ ನಿಯಮ ಹಾಗೂ ನಿರ್ದೇಶನಗಳನ್ನು ಅನುಸರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 313 ವೆಚ್ಚ-1/2016, ದಿನಾಂಕ: 27.08.2016 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 30 ಎಫ್‌ಆರ್‌ಓ 2016, ದಿನಾಂಕ: 12.08.2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
29.08.2016
(ಎಲ್.ಎಸ್. ಶ್ರೀಕಂಠಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ (ಸಪ್ರಕೈ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ:**

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ ಕಳುಹಿಸಲಾಗಿದೆ. ತದನಂತರ, ಪ್ರಕಟಗೊಂಡ ಸಂಚಿಕೆಗಳ 25 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.**

ಪ್ರತಿಯನ್ನು:

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
3) ಪ್ರಧಾನ ಮಹಾಲೇಖಪಾಲರು (ಎ &ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-1.
5) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6) ಆಂತರಿಕ ಆರ್ಥಿಕ ಸಲಹೆಗಾರರು ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
7) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನಸೌಧ, ಬೆಂಗಳೂರು.
8) ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯ ನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ [KIADB], ರಾಷ್ಟ್ರೋತ್ಥಾನ ಪರಿಷತ್ ಭವನ, ನೃಪತುಂಗ ರಸ್ತೆ, ಬೆಂಗಳೂರು-1.
9) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತ, ಕೈಗಾರಿಕಾ ವಸಾಹತು, ರಾಜಾಜಿನಗರ, ಬೆಂಗಳೂರು-10.
10) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
11) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
12) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.